# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1574 |
| ಸದಸ್ಯರ ಹೆಸರು | : | ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 19.12.2025. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಳೆದ 2 ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ; ಅದರಲ್ಲಿ ಅತ್ಯಧಿಕ ಪ್ರಕರಣಗಳು ದಾಖಲಾಗಿರುವ ಜಿಲ್ಲೆಗಳು ಯಾವುವು; | ಹೌದು, ರಾಜ್ಯದಲ್ಲಿ ಕಳೆದ 2 ವರ್ಷಗಳ್ಲಿ ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆ ಪ್ರಕರಣಗಳ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ RCH ಪೋರ್ಟಲ್‌ನಲ್ಲಿ ದಾಖಲಾದಂತೆ) ಸಂಖ್ಯೆ ಒಟ್ಟು:5975<br><br>(ಕ್ರ. ಸಂ. / ವರ್ಷ / 14 ರಿಂದ 18 ವರ್ಷದೊಳಗಿನ ಬಾಲಗರ್ಭಿಣಿ ಪ್ರಕರಣಗಳ ಸಂಖ್ಯೆ)<br>1 / 2024-25 / 4746<br>2 / 2025-26 (ಅಕ್ಟೋಬರ್ ಅಂತ್ಯಕ್ಕೆ) / 1229<br><br>ಅದರಲ್ಲಿ ಅತ್ಯಧಿಕ ಪ್ರಕರಣಗಳು ದಾಖಲಾಗಿರುವ ಜಿಲ್ಲೆಗಳು ಕ್ರಮಾಂಕವಾಗಿ ಬೆಂಗಳೂರ ನಗರ, ರಾಯಚೂರು, ವಿಜಯಪುರ, ತುಮಕೂರು, ಬಳ್ಳಾರಿ. |
| ಆ) | ಬಾಲ ಗರ್ಭಿಣಿಯರಾಗದಂತೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ; | **ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳ ವಿವರ.**<br>• ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ-2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.<br>• ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆಯ |

| | | |
|---|---|---|
| | | ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.<br>• ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಬಾಲ್ಯವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಪ್ರತಿ ಗ್ರಾಮ ಪಂಚಾಯತಿಯಲ್ಲಿ ರಚಿಸಲಾಗಿರುವ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯ ರೀತಿಯಲ್ಲಿ ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲಿ ಕೂಡ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯನ್ನು ರಚಿಸಿ ದಿನಾಂಕ:26.11.2025 ರಂದು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆ.<br>• ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.<br>• ಮಕ್ಕಳ ಸಹಾಯವಾಣಿ-1098 (24*7) ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ.<br>• ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.<br>• ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.<br>• ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.<br>• ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗಿದೆ.<br>• ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಲಕ್ಷಾಂತರ ಭಾಗೀದಾರರು, ಶಾಲಾ |

ಮಕ್ಕಳನ್ನೊಳಗೊಂಡಂತೆ ಸಾರ್ವಜನಿಕರು ಪ್ರಯೋಜನ ಪಡೆದಿರುತ್ತಾರೆ.

- ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ.
- ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಆಯ್ಕೆಮಾಡಿ ತರಬೇತಿ ನೀಡಲಾಗಿದೆ. (ಪ್ರಸ್ತುತ 173 ಬೆಂಬಲ ವ್ಯಕ್ತಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ).
- ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯವಿಧಾನ (SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯವಿಧಾನದಂತೆ ಕಾರ್ಯನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.
- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಸಂತ್ರಸ್ಥೆಗೆ 18 ವರ್ಷ ವಯಸ್ಸು ಪೂರ್ತಿಗೊಳ್ಳುವವರೆಗೆ ವಾಸ್ಯವ್ಯಕ್ಕೆ ಅವಕಾಶ ಮಾಡಿಕೊಡಲಾಗುವುದು ಹಾಗೂ 23 ವರ್ಷದವರೆಗೂ ಅವಶ್ಯಕ ಬೆಂಬಲ ನೀಡಲಾಗುವುದು.
- ಸಂತ್ರಸ್ಥೆಗೆ ಆರೋಗ್ಯಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6000/-ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವ ಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/-ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.
- Pradhan Mantri Jan Arogya Yojana (PM-JAY) ಅಡಿಯಲ್ಲಿ ವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯ ವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.
- ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಿದೆ.
- ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ.
- ಮಕ್ಕಳ ರಕ್ಷಣಾ ನೀತಿ -2023 ಕುರಿತು ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಅರಿವು ಮೂಡಿಸಲಾಗಿದೆ. ಮಕ್ಕಳ ರಕ್ಷಣಾ ಸಮಿತಿಗಳನ್ನು

| | | |
|---|---|---|
| | | ಪ್ರತಿ ಶಾಲೆಗಳಲ್ಲಿಯೂ ರಚಿಸಲು ಕ್ರಮವಹಿಸಲಾಗಿದೆ.<br>• ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯ ವಿಧಾನ (SOP) ವನ್ನು ದಿನಾಂಕ :02.09.2025 ರಂದು ಹೊರಡಿಸಲಾಗಿದೆ.<br>• ಪ್ರತಿ ಜಿಲ್ಲೆಯಲ್ಲಿ ಬಾಲ್ಯವಿವಾಹ ನಿಷೇಧಕಾಯ್ದೆ ಮತ್ತು ಪೋಕ್ಸೋ ಕಾಯ್ದೆಗಳ ಬಗ್ಗೆ ಎಲ್ಲಾ ಶಾಲಾ/ ಕಾಲೇಜುಗಳು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ವಿವಿಧ ಸಾರ್ವಜನಿಕ ಸಭೆ ಸಭಾರಂಭಗಳಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಮತ್ತು ಇತರೆ ಇಲಾಖಾ ಅಧಿಕಾರಿ/ ಸಿಬ್ಬಂದಿಯ ಸಹಕಾರದೊಂದಿಗೆ ಜನ ಸಾಮಾನ್ಯರಿಗೆ ಜಾಗೃತಿ/ ಅರಿವು ಮೂಡಿಸಲು ಕ್ರಮ ಕೈಗೊಳ್ಳುತ್ತಿದ್ದಾರೆ |
| ಇ) | ಪ್ರತಿ ಗ್ರಾಮಪಂಚಾಯಿತಿಗಳಲ್ಲಿ ಮಹಿಳೆ ಮತ್ತು ಮಕ್ಕಳ ರಕ್ಷಣೆಗೆ ಸಮಿತಿಯಗಳನ್ನು ರಚಿಸಲಾಗಿದೆಯೇ; | • ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ, ಬಾಲ್ಯವಿವಾಹ ನಿಷೇಧ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ರಚಿಸಲಾಗಿರುವ ಸಮಿತಿಗಳನ್ನು ವಿಲೀನಗೊಳಿಸಿ ದಿನಾಂಕ: 06.08.2019 ರಂದು ಮಹಿಳೆಯರ ಮತ್ತು ಮಕ್ಕಳ ಕಾವಲು ಸಮಿತಿಯನ್ನು ರಚಿಸಲಾಗಿದೆ.<br><br>• ಮುಂದುವರೆದು, ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಬಾಲ್ಯವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಪ್ರತಿ ಗ್ರಾಮ ಪಂಚಾಯತಿಯಲ್ಲಿ ರಚಿಸಲಾಗಿರುವ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯ ರೀತಿಯಲ್ಲಿ ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲಿ ಕೂಡ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯನ್ನು ರಚಿಸಿ ದಿನಾಂಕ:26.11.2025 ರಂದು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆ. |
| ಈ) | ಈ ಸಮಿತಿಗಳಿಂದ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ? | ಸದರಿ ಸಮಿತಿಗಳು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು **ಅನುಬಂಧದಲ್ಲಿ** ಒದಗಿಸಿದೆ. |

ಮಮಇ 185 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**

ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

# ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 152 ಮಭಾಬ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ: 26.11.2025.

## ಅಧಿಸೂಚನೆ

ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು, ಬಾಲ್ಯವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಪ್ರತಿ ಗ್ರಾಮಪಂಚಾಯತಿಯಲ್ಲಿ ರಚಿಸಲಾಗಿರುವ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯ ರೀತಿಯಲ್ಲಿ ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲೂ ಕೂಡ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯನ್ನು ಈ ಕೆಳಕಂಡ ಸದಸ್ಯರನ್ನೊಳಗೊಂಡ **ಅನುಬಂಧದಲ್ಲಿ** ವಿವರಿಸಿರುವ ಅಂಶಗಳಂತೆ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಸದಸ್ಯರು | ಪದನಾಮ |
|---|---|---|
| (1) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಅಧ್ಯಕ್ಷರು | ಅಧ್ಯಕ್ಷರು |
| (2) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಉಪಾಧ್ಯಕ್ಷರು (ಮಹಿಳೆಯರು). (ಉಪಾಧ್ಯಕ್ಷರು, ಮಹಿಳೆಯರಾಗಿಲ್ಲದಿದ್ದಲ್ಲಿ, ಅಧ್ಯಕ್ಷರು ಹಿರಿಯ ಮಹಿಳಾ ಸದಸ್ಯರನ್ನು ಉಪಾಧ್ಯಕ್ಷರನ್ನಾಗಿ ನೇಮಿಸುವುದು). | ಉಪಾಧ್ಯಕ್ಷರು |
| (3) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ವ್ಯಾಪ್ತಿಯಲ್ಲಿ ಬರುವ ನಗರ ಪಾಲಿಕೆಯ/ ಪುರಸಭೆ/ ಪಟ್ಟಣ ಪಂಚಾಯತ್‌ನ ಎರಡು ಸದಸ್ಯರುಗಳು (ಇವರುಗಳಲ್ಲಿ ಕಡ್ಡಾಯವಾಗಿ ಕನಿಷ್ಠ ಒಬ್ಬರು ಮಹಿಳೆಯರಾಗಿರುವುದು). | ಸದಸ್ಯರು |
| (4) | ನಗರಪಾಲಿಕೆ /ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು (BEO). | ಸದಸ್ಯರು |
| (5) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ತಾಲ್ಲೂಕು ವೈದ್ಯಾಧಿಕಾರಿಗಳು (THO). | ಸದಸ್ಯರು |
| (6) | ನಗರ/ ಪಟ್ಟಣವ್ಯಾಪ್ತಿಯ ಪೊಲೀಸ್ ಸಬ್ ಇನ್ಸಪೆಕ್ಟರ್ (ವೃತ್ತ ನಿರೀಕ್ಷಕರು ನಿಯೋಜಿಸುವುದು). | ಸದಸ್ಯರು |
| (7) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ಶಿಶು ಅಭಿವೃಧಿ ಯೋಜನಾಧಿಕಾರಿಗಳು. | ಸದಸ್ಯರು |
| (8) | ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ವ್ಯಾಪ್ತಿಯ ಸ್ವಯಂ ಸೇವಾ ಸಂಸ್ಥೆಯ ಎರಡು (2) ಮಹಿಳಾ ಪ್ರತಿನಿಧಿಗಳು (ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಎರಡು (2) ಮಹಿಳಾ ಪ್ರತಿನಿಧಿಗಳನ್ನು ನಾಮ ನಿರ್ದೇಶನ ಮಾಡುವುದು). | ಸದಸ್ಯರು |
| (9) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯ ಪ್ರೌಢಶಾಲೆಯಲ್ಲಿ ಓದುತ್ತಿರುವ ಒಬ್ಬ ವಿದ್ಯಾರ್ಥಿ ಮತ್ತು ಒಬ್ಬ ವಿದ್ಯಾರ್ಥಿನಿ (BEO ರವರಿಂದ ನಾಮ ನಿರ್ದೇಶನ ಮಾಡುವುದು). | ಸದಸ್ಯರು |
| (10) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಕಾರ್ಮಿಕ ಅಧಿಕಾರಿ. | ಸದಸ್ಯರು |

| | | |
|---|---|---|
| (11) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ. | ಸದಸ್ಯರು |
| (12) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ. | ಸದಸ್ಯರು |
| (13) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ. | ಸದಸ್ಯರು |
| (14) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನ ವಾರ್ಡ್ ಮಟ್ಟದ ಅಧಿಕಾರಿಗಳು | ಸದಸ್ಯರು |
| (15) | ನಗರ ಪಾಲಿಕೆ/ಪುರಸಭೆ/ ಪಟ್ಟಣ ಪಂಚಾಯತ್‌ಗಳ ಮುಖ್ಯ ಅಧಿಕಾರಿಗಳು. | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ರಂಗನಾಥ)**
ಸರ್ಕಾರದ ಉಪ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು - ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 200 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

<u>ಇವರಿಗೆ:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳು ರಕ್ಷಣಾ ಆಯೋಗ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
12. ಎಲ್ಲಾ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.

13. ಎಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
14. ಎಲ್ಲಾಉಪನಿರ್ದೇಶಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
15. ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು.
16. ಎಲ್ಲಾ ಆಯುಕ್ತರು, ನಗರಸಭೆ /ಪುರಸಭೆ/ ಮಹಾನಗರ ಪಾಲಿಕೆ.
17. ಎಲ್ಲಾ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
18. ಎಲ್ಲಾ ತಹಶೀಲ್ದಾರರು.
19. ಎಲ್ಲಾ ಕಾರ್ಯ ನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್.
20. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
21. ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು.
22. ಎಲ್ಲಾ ಸರ್ಕಲ್ ಪೊಲೀಸ್ ಇನ್ಸಪೆಕ್ಟರ್ಸ್,
23. ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು.
24. ಎಲ್ಲಾ ಪುರಸಭೆ /ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು.
25. ಎಲ್ಲಾ ಉಪ ನೋಂದಣಾಧಿಕಾರಿಗಳು.
26. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು.
27. ಎಲ್ಲಾ ಗ್ರಾಮಪಂಚಾಯತಿಯ ಅಧ್ಯಕ್ಷರು.
28. ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿ ಕಾರ್ಯದರ್ಶಿ.
29. ಎಲ್ಲಾ ಕಂದಾಯ ನಿರೀಕ್ಷಕರು.
30. ಎಲ್ಲಾ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದ ಗ್ರಾಮ ಲೆಕ್ಕಿಗರು.
31. ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು/ ಶಿಕ್ಷಕರು.

**(ಕ್ರಮ ಸಂಖ್ಯೆ: 10 ರಿಂದ 31 ರವರೆಗೆ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯರವರ ಮುಖಾಂತರ).**

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.

*****

# ಅನುಬಂಧ

## ಅ) ಕರ್ತವ್ಯಗಳು ಮತ್ತು ಜವಾಬ್ದಾರಿಗಳು

1. ನಗರ ಪಾಲಿಕೆಯ/ ಪುರಸಭೆ/ ಪಟ್ಟಣ ಪಂಚಾಯತ್‌ನ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯಲ್ಲಿ 50% ಕ್ಕಿಂತ ಹೆಚ್ಚು ಮಹಿಳಾ ಸದಸ್ಯರಿರಬೇಕು.
2. ಕನಿಷ್ಟ ಪ್ರತಿ ಮೂರು (3) ತಿಂಗಳಿಗೊಮ್ಮೆ ಸಭೆಯನ್ನು ಏರ್ಪಡಿಸುವುದು.
3. ಸಮಿತಿ ಸಭೆಗಳಲ್ಲಿ ತೀರ್ಮಾನಿಸುವ ಎಲ್ಲಾ ಕಾರ್ಯಕ್ರಮಗಳು, ತೀರ್ಮಾನಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಸದಸ್ಯ ಕಾರ್ಯದರ್ಶಿಯದ್ದಾಗಿರುತ್ತದೆ.
4. ಸಭೆಯ ನಡಾವಳಿಗಳನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಕಳುಹಿಸುವುದು.
5. ಸಭೆಯ ಕೋರಂ ಅಧ್ಯಕ್ಷರು ಸೇರಿದಂತೆ ಒಟ್ಟು ಸದಸ್ಯರಲ್ಲಿ ಶೇಕಡ 50 ಕ್ಕಿಂತ ಹೆಚ್ಚಿನ ಸದಸ್ಯರು ಸಭೆಯಲ್ಲಿ ಹಾಜರಿರತಕ್ಕದ್ದು.
6. ಕೋರಂ ಕೊರತೆಯಿಂದಾಗಿ ಸಭೆಯನ್ನು ಸಡೆಸಲಾಗದಿದ್ದಲ್ಲಿ, ಸದರಿ ದಿನಾಂಕದಿಂದ 4 ದಿನಗಳ ಒಳಗೆ ಮತ್ತೊಂದು ದಿನಕ್ಕೆ ಸದಸ್ಯ ಕಾರ್ಯದರ್ಶಿಯು ಸಭೆಯನ್ನು ನಿಗದಿ ಪಡಿಸತಕ್ಕದ್ದು. ನಿಗದಿಪಡಿಸಲ್ಪಟ್ಟ ಸಭೆಯೂ ಸಹ ಅಗತ್ಯ ಕೋರಂ ಹೊಂದಿರದಿದ್ದಲ್ಲಿ, ಆಗವಾಸ್ತವವಾಗಿ ಹಾಜರಿರುವ ಸದಸ್ಯರ ಕೋರಂ ಸಾಕಾಗುತ್ತದೆ.
7. ಅಧ್ಯಕ್ಷರು ಗೈರು ಹಾಜರಿದ್ದಲ್ಲಿ ಸಭೆಯನ್ನು ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸುವುದು.
8. ಅಧ್ಯಕ್ಷರು ಮತ್ತು ಉಪಧ್ಯಕ್ಷರು ಇಬ್ಬರೂ ಗೈರು ಹಾಜರಿದ್ದಲ್ಲಿ ಹಾಜರಿದ್ದ ಹಿರಿಯ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ನ ಸದಸ್ಯರ ಅಧ್ಯಕ್ಷತೆಯಲ್ಲಿ ಸಭೆ ನಡೆಸುವುದು.
9. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡುಮಕ್ಕಳ ಮಾಹಿತಿ ನಿರ್ವಹಿಸುವುದು.
10. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಶಾಲೆ, ಪೊಲೀಸ್, ಅಂಗನವಾಡಿ, ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳುವುದು.
11. ಅನೈತಿಕ ಸಾಗಾಣಿಕೆಗೆ ಒಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ಸಹಾಯವನ್ನು ಒದಗಿಸುವುದು.
12. ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಅನೈತಿಕ ಸಾಗಾಣಿಕೆಯನ್ನು ತಡೆಯುವಲ್ಲಿ ಉಸ್ತುವಾರಿ ಮಾಡುವುದು.
13. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಯಲು ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿ ಕೊಳ್ಳುವುದು. ಅನೈತಿಕವಾಗಿ ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಯಲು, ಬಾಲ್ಯವಿವಾಹ, ಬಾಲಗರ್ಭಿಣಿ, ಬಾಲಭಿಕ್ಷಾಟನೆ, ಬಾಲಕಾರ್ಮಿಕತೆಗಳನ್ನು ತಡೆಯಲು ಸೂಕ್ತ ಪ್ರಚಾರ/ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಮತ್ತು ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢಿಕರಣಗೊಳಿಸುವುದು.
14. ಮಕ್ಕಳ ಅನೈತಿಕ ಸಾಗಾಣಿಕೆ, ಬಾಲ್ಯವಿವಾಹ, ಬಾಲಕಾರ್ಮಿಕತೆ ತಡೆಯಲು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಶಾಲೆಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಬೇಕು.
15. ಹೊಸ ವ್ಯಕ್ತಿಗಳು ನಗರ ಪಾಲಿಕೆ / ಪುರಸಭೆ / ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಆಗಮಿಸಿದ ಬಗ್ಗೆ ದಾಖಲೆ ಇಡಬೇಕು.
16. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡಬೇಕು.
17. ವಲಸೆ ಹೋದ ಕುಟುಂಬದ ಮಾಹಿತಿ ಇಡಬೇಕು ಮತ್ತು ಈ ಕುಟುಂಬದ ಬಗ್ಗೆ ಮೇಲ್ವಿಚಾರಣೆ ಮಾಡಬೇಕು.
18. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಯಾವುದೇ ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ಕೂಡಲೇ ಸಂಬಂಧಪಟ್ಟ ಬಾಲ್ಯವಿವಾಹ ನಿಷೇಧಾಧಿಕಾರಿಗಳ ಗಮನಕ್ಕೆ ತಂದು ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು ಮತ್ತು ಬಾಲ್ಯವಿವಾಹ ನಡೆದು ಹೋಗಿದಲ್ಲಿ ಎಫ್.ಐ.ಆರ್. ಒಳಗೊಂಡಂತೆ ಅಗತ್ಯ ಕ್ರಮ ಕೈಗೊಳ್ಳುವುದು.

19. ಬೇಸಿಗೆ ರಜೆ ಅವಧಿ ಮುಗಿದ ನಂತರ ಶಾಲೆಗೆ ದಾಖಲಾದ/ ದಾಖಲಾಗಬೇಕಾದ ಮಕ್ಕಳ ಸಮೀಕ್ಷೆ ನಡೆಸುವುದು.
20. ಶಿಕ್ಷಣ ಇಲಾಖೆಯೊಂದಿಗೆ ಕೈ ಜೋಡಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಾಗುವ ಬಗ್ಗೆ ಕ್ರಮವಹಿಸುವುದು.
21. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಮಕ್ಕಳ ವಿದ್ಯಾಭ್ಯಾಸದ ಮಹತ್ವ, ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯ ಮುಂತಾದವುಗಳನ್ನು ಸಾರ್ವಜನಿಕರ ಗಮನಕ್ಕೆ ತರುವುದು.
22. ಶಾಲೆಯಿಂದ ಹೊರಗುಳಿದ ಪ್ರಾಯ ಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.
23. ಉತ್ತಮ ಅಂಕಗಳನ್ನು ಪಡೆದ ಮಕ್ಕಳನ್ನು ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರೋತ್ಸಾಹಿಸುವುದು.
24. ಹೆಣ್ಣು ಮಕ್ಕಳ ದಾಖಲಾತಿ ಹೆಚ್ಚಿರುವ ಶಾಲೆಗಳನ್ನು ಗುರುತಿಸಿ, ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸನ್ಮಾನಿಸುವುದು.
25. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯ ಮೂಲಕ ಉತ್ತಮ ಶಿಕ್ಷಣ ತಜ್ಞರಿಂದ ವಿದ್ಯಾಭ್ಯಾಸದ ಮಹತ್ವದ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವುದು.
26. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸರಕಾರಿ ಸೌಲಭ್ಯಗಳನ್ನು ನೀಡುವಾಗ ಫಲಾನುಭವಿಗಳಿಂದ ಅವರ ಕುಟುಂಬಗಳಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಮತ್ತು ಬಾಲ ಭಿಕ್ಷಾಟನೆ ಅವಕಾಶ ನೀಡುವುದಿಲ್ಲವೆಂದು ಹಾಗೂ ಯಾವ ಮಕ್ಕಳೂ ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದಾಗಿ ಕರಾರು ಪತ್ರ ಬರೆಯಿಸಿಕೊಳ್ಳುವುದು.
27. ಮಕ್ಕಳನ್ನು ದುಡಿಸುವ ಮಾಲೀಕರುಗಳ ಹಾಗೂ ಸಹಕರಿಸುವವರ ವಿರುದ್ಧ ಕ್ರಮ ಜರುಗಿಸುವಂತೆ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡುವುದು.
28. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕ್ಕಾಗಿ ಸಮುದಾಯದ, ಇಲಾಖೆಗಳ, ನಾಗರಿಕ ಸಂಘ ಸಂಸ್ಥೆಗಳ ಪಾಲುದಾರಿಕೆ, ಸಹಭಾಗಿತ್ವ, ಸಮನ್ವಯತೆ ಮತ್ತು ಹೊಣೆಗಾರಿಕೆ ಕುರಿತು ಕ್ರಮ ಕೈಗೊಳ್ಳುವುದು.
29. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ ಯಾವುದೇ ಅಂಗಡಿ ಕಾರರು, ಹೋಟೆಲ್ ಮಾಲೀಕರು, ವ್ಯಾಪಾರಸ್ಥರು, ಉದ್ದಿಮೆದಾರರು, ಕೈಗಾರಿಕೆಗಳ ಮಾಲೀಕರು, ರೈತರು, ಅಥವಾ ಯಾವುದೇ ವ್ಯಕ್ತಿಗಳು ಮಕ್ಕಳನ್ನು ಅಂಗಡಿ, ಹೋಟೆಲ್, ಉದ್ದಿಮೆ, ಕೈಗಾರಿಕೆ, ಹೊಲ, ಗದ್ದೆ, ಅಥವಾ ಇನ್ನೂ ಯಾವುದೇ ಸ್ಥಳದಲ್ಲಿ ದುಡಿಸಿಕೊಳ್ಳದಂತೆ ಅಥವಾ ಜೀತ ಸಂಬಂಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಮತ್ತು ನಿರಂತರ ಶಿಕ್ಷಣ ಒದಗಿಸಲು ಕ್ರಮ ಕೈಗೊಳ್ಳುವುದು.
30. ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಘಡಗಳಿಗೆ 18 ವರ್ಷದೊಳಗಿನ ಮಕ್ಕಳು ಮತ್ತು ಮಹಿಳೆಯರು ಬಲಿಯಾಗದಂತೆ ರಕ್ಷಣೆ ನೀಡುವುದು ಹಾಗೂ ಈ ಕುರಿತು ಕ್ರಮ ಕೈಗೊಳ್ಳುವುದು.
31. ಅನಾಥ/ ಪೋಷಕರಿಗೆ ಬೇಡವಾದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು. ಸಂಕಷ್ಟದಲ್ಲಿರುವ ಮಹಿಳೆ/ ಹೆಣ್ಣು ಮಕ್ಕಳು ಗರ್ಭಿಣಿಯಾದಾಗ ಇವರನ್ನು ನಿರಂತರವಾಗಿ ಅನುಸರಣೆ ಮಾಡುವುದು.
32. ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಕೈಗೆತ್ತಿಕೊಂಡು ಸಮಸ್ಯೆಗಳನ್ನು ಬಗೆಹರಿಸುವುದು.
33. ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಕಂಡುಬಂದಲ್ಲಿ ಮಗುವಿಗೆ ರಕ್ಷಣೆ ನೀಡಿ ತಕ್ಷಣ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸುವುದು.
34. ಕಡ್ಡಾಯವಾಗಿ ಮಕ್ಕಳ ಸಭೆಗಳನ್ನು ಮಕ್ಕಳ ಗ್ರಾಮ ಸಭೆಗಳ ರೀತಿಯಲ್ಲಿ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳಲ್ಲಿ ನಡೆಸುವಂತೆ ಕ್ರಮವಹಿಸಿ ಸದರಿ ಸಭೆಯಲ್ಲಿ ಚರ್ಚಿಸಿದ ಅಂಶಗಳಿಗೆ ಕ್ರಮವಹಿಸುವುದು.
35. ಮಕ್ಕಳಿಗೆ ಸಂಬಂಧಿಸಿದ ಯೋಜನೆಗಳಲ್ಲಿ ಅವಶ್ಯಕವಾದ ಸೌಲಭ್ಯ ಪರಿಹಾರ, ಪುನರ್ವಸತಿ ಮತ್ತು ಪರ್ಯಾಯ ವ್ಯವಸ್ಥೆಗಳನ್ನು ಆಯಾ ಇಲಾಖೆಗಳ ಅನುಸಾರವಾಗಿ ಮಕ್ಕಳಿಗೆ/ ಕುಟುಂಬಗಳಿಗೆ ಒದಗಿಸುವುದು.
36. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಪ್ರತಿಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್/ ಮೀನಾತಂಡ/ ಮಕ್ಕಳ ಸುರಕ್ಷಾ ಸಮಿತಿಗಳ ಕಾರ್ಯವೈಖರಿಯ ಬಗ್ಗೆ

ಮೇಲ್ವಿಚಾರಣೆ ಮಾಡುವುದು ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳುವುದು.

**ಆ. ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರ ಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ಈ ಕೆಳಗಿನಂತೆ ನಿಗದಿಗೊಳಿಸಲಾಗಿದೆ.**

1. ಸಮಿತಿಯ ಸಭೆಯನ್ನು ಸದಸ್ಯ ಕಾರ್ಯದರ್ಶಿಯು ಸಮಿತಿಯ ಅಧ್ಯಕ್ಷರೊಂದಿಗೆ ಸಮಾಲೋಚಿಸಿ, ನಿಗದಿಪಡಿಸಿದ ದಿನಾಂಕ ಮತ್ತು ಸಮಯದಲ್ಲಿ ನಡೆಸತಕ್ಕದ್ದು.
2. ಸದಸ್ಯ ಕಾರ್ಯದರ್ಶಿಯು ಪ್ರತಿಯೊಂದು ಸಭೆಯ ಬಗ್ಗೆ ಸದಸ್ಯರಿಗೆ ಕನಿಷ್ಠ ಮೂರು (3) ದಿನಗಳ ಮೊದಲು ಸಭಾ ಸೂಚನೆಯನ್ನು ಉದ್ದೇಶಿತ ಕಾರ್ಯಸೂಚಿಯೊಂದಿಗೆ ನೀಡತಕ್ಕದ್ದು.
3. ಸದಸ್ಯ ಕಾರ್ಯದರ್ಶಿಯು ಒಂದು ದಿನದ ಮೊದಲು ನೋಟೀಸನ್ನು ನೀಡುವ ಮೂಲಕ ತುರ್ತು ಸಭೆಯನ್ನು ಕರೆಯಬಹುದು.
4. ಮುಖ್ಯ ಅಧಿಕಾರಿಯಾಗಿ ತಮ್ಮ ಅಧಿಕಾರದ ವ್ಯಾಪ್ತಿಯಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗಾಗಿ ಎಲ್ಲ ಅಗತ್ಯ ಕ್ರಮವಹಿಸುವುದು ಮತ್ತು ಮಹಿಳೆಯರು ಮತ್ತು ಮಕ್ಕಳು ಸುರಕ್ಷಿತವಾಗಿರುವುದುನ್ನು ಖಾತ್ರಿಪಡಿಸಿಕೊಳ್ಳುವುದು.
5. ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿ ನಿಯಮಿತವಾಗಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಭೆ ನಡೆಯುವಂತೆ ಕ್ರಮವಹಿಸುವುದು.
6. ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಜನರಲ್ಲಿ ಅರಿವು ಮೂಡಿಸಲು ಸೂಕ್ತ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

**ಇ. ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯಲ್ಲಿನ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನ ಸದಸ್ಯರ ಜವಾಬ್ದಾರಿಗಳು**

1. 18 ವರ್ಷದೊಳಗಿನ ಎಲ್ಲ ಮಕ್ಕಳ ಮಾಹಿತಿ ನಗರ ಪಾಲಿಕೆ/ ಪುರಸಭೆ/ ಪಂಚಾಯತ್‌ನಲ್ಲಿ ನಿರ್ವಹಿಸುತ್ತಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
2. ಆರೋಗ್ಯ ಇಲಾಖೆಯ ಶುಶ್ರೂಷಕರು/ ದಾದಿಗಳು/ ಆಶಾಕಾರ್ಯಕರ್ತೆಯರೊಂದಿಗೆ ಪ್ರತಿಯೊಂದು ವಾರ್ಡಗಳಲ್ಲಿ ಆಗುವ ಪ್ರತಿಯೊಂದು ಜನನದ ಬಗ್ಗೆ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಪರಿಶೀಲಿಸಿ ನೋಂದಣಿಯಾದ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
3. ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯವಿವಾಹ ತಡೆಯಲು ಸಹಕರಿಸುವುದು. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
4. ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.

**ಈ. ತಾಲ್ಲೂಕು ವೈದ್ಯಾಧಿಕಾರಿಗಳು**

1. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನಲ್ಲಿ ಜನಿಸಿದ ಮಕ್ಕಳ ನೋಂದಣಿ ಆಗಿರುವ ಬಗ್ಗೆ ತಮ್ಮ ಅಧೀನ ಸಿಬ್ಬಂದಿಗಳ ಸಹಕಾರದಿಂದ ಖಾತ್ರಿ ಮಾಡಿಕೊಳ್ಳುವುದು.
2. ಮಹಿಳೆಯರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯವಿವಾಹದಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು, ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ತಮ್ಮ ಅಧೀನ ಸಿಬ್ಬಂದಿಗಳಿಗೆ ಅರಿವು ಮೂಡಿಸುವುದು.
3. ಬಾಲ್ಯವಿವಾಹಗಳು ನಡೆಯುವುದು ಕಂಡುಬಂದ ಸಂದರ್ಭದಲ್ಲಿ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯವಿವಾಹ ತಡೆಯಲು ಸಹಕರಿಸುವುದು.
4. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
5. ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ತಕ್ಷಣ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿ ದಾರರ ಹೆಸರನ್ನು ಗೌಪ್ಯವಾಗಿಡುವುದು.
6. ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯ ಗಮನಕ್ಕೆತರುವುದು.

7. ತನ್ನ ಕಾರ್ಯಕ್ಷೇತ್ರದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಪೊಲೀಸ್ ಹಾಗೂ ಸಮಿತಿಯ ಗಮನಕ್ಕೆ ತರುವುದು.
8. ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಗಡಗಳಿಗೆ 18 ವರ್ಷದೊಳಗಿನ ಮಕ್ಕಳು ಮತ್ತು ಮಹಿಳೆಯರು ಬಲಿಯಾಗದಂತೆ ರಕ್ಷಣೆ ಮಾಡಲು ಸಮಿತಿಯ ಗಮನಕ್ಕೆ ತರುವುದು.

**ಉ. ಪೊಲೀಸ್ ಅಧಿಕಾರಿ:**

1. ಬಾಲ್ಯವಿವಾಹ ತಡೆಯುವುದಕ್ಕೆ ಬಾಲ್ಯವಿವಾಹ ನಿಷೇಧ ಅಧಿಕಾರಿಗಳಿಗೆ ಪೊಲೀಸ್ ಬೆಂಬಲ ಒದಗಿಸುವುದು.
2. ಸಮಿತಿಯ ಸಭೆಗೆ ಹಾಜರಾಗುವುದು ಮತ್ತು ಸಭಾನಿರ್ಣಯದಂತೆ ಕ್ರಮವಹಿಸುವುದು.
3. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳು ದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
4. ಮಕ್ಕಳ ದೌರ್ಜನ್ಯ ಪ್ರಕರಣಗಳು, ಬಾಲ್ಯವಿವಾಹ ಪ್ರಕರಣಗಳು, ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ಎಫ್.ಐ.ಆರ್. ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸುವುದು ಮತ್ತು ಸಂತ್ರಸ್ತ ಮಕ್ಕಳ ರಕ್ಷಣೆಗೆ ಕ್ರಮವಹಿಸುವುದು ಮತ್ತು ಈ ಪ್ರಕರಣಗಳಲ್ಲಿ ಅಗತ್ಯ ಆರಕ್ಷಕ ಬೆಂಬಲವನ್ನು ತುರ್ತಾಗಿ ಸಂಬಂಧಿಸಿದ ಇಲಾಖೆ/ ಅಧಿಕಾರ/ ಸಿಬ್ಬಂದಿಗಳಿಗೆ ನೀಡುವುದು.

**ಊ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು:**

1. ತಮ್ಮ ಅಧೀನ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕರು ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ನಿಯಮಾನುಸಾರ ಕ್ರಮವಹಿಸುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಬಾಲ್ಯವಿವಾಹಗಳು ನಡೆಯುವುದು ಕಂಡುಬಂದ ಸಂದರ್ಭದಲ್ಲಿ ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು.
3. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
4. ಬಾಲ್ಯವಿವಾಹದ ಬಗ್ಗೆ ಮಾಹಿತಿ ನೀಡಿದ ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
5. ಸಮಾಜ ಕಲ್ಯಾಣ ಇಲಾಖೆ ಹಾಗೂ ಒಳಾಡಳಿತ ಇಲಾಖೆ (ಪೊಲೀಸ್ ಇಲಾಖೆ) ಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳು ದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
6. ಸಮಿತಿಯ ಸಭೆಗೆ ಹಾಜರಾಗಿ, ಸಭಾನಿರ್ಣಯದಂತೆ ಕ್ರಮವಹಿಸುವುದು.

**ಎ. ಸ್ವಯಂ ಸೇವಾ ಸಂಸ್ಥೆಯ ಪ್ರತಿ ನಿಧಿಗಳು**

1. ಸ್ವಯಂ ಸೇವಾ ಸಂಸ್ಥೆಗಳು ಮಕ್ಕಳ ರಕ್ಷಣೆಯ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುವಂತೆ ಸ್ವಯಂ ಸೇವಾ ಸಂಸ್ಥೆಗಳನ್ನು ಮನವೊಲಿಸುವುದು.
2. ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಎಲ್ಲ ಸ್ವಯಂ ಸೇವಾ ಸಂಸ್ಥೆಗಳು, ಸ್ಥಳೀಯ ಸಂಸ್ಥೆ, ಇಲಾಖೆ, ಅಧಿಕಾರಿ/ ಸಿಬ್ಬಂದಿಯೊಂದಿಗೆ ಸಹಕರಿಸುವಂತೆ ಕ್ರಮವಹಿಸುವುದು.

**ಏ. ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿ**

1. ವಿದ್ಯಾರ್ಥಿ ವೃಂದದಲ್ಲಿ ಮಕ್ಕಳ ಸಹಾಯವಾಣಿ (1098)ರ ಬಗ್ಗೆ, ಮಕ್ಕಳ ಹಕ್ಕುಗಳ ಬಗ್ಗೆ, ಮಕ್ಕಳಿಗಾಗಿ ಇರುವ ಸೌಲಭ್ಯಗಳ ಬಗ್ಗೆ ಹಾಗೂ ಮಕ್ಕಳ ರಕ್ಷಣೆಗಾಗಿ ಇರುವ ಕಾನೂನುಗಳು ಮತ್ತು ಸರ್ಕಾರಿ ವ್ಯವಸ್ಥೆಯ ಬಗ್ಗೆ ಅರಿವು ಮೂಡಿಸಲು ಪ್ರಯತ್ನಿಸುವುದು.

**ಐ. ಕ್ಷೇತ್ರ ಶಿಕ್ಷಣಾಧಿಕಾರಿಗಳು (BEO)**

1. ಶಾಲೆಯಲ್ಲಿ ಮಕ್ಕಳ ನಿರಂತರ ಹಾಜರಾತಿಯನ್ನು ಖಾತ್ರಿಪಡಿಸಿಕೊಳ್ಳುವುದು.

2. ಮಕ್ಕಳ ಗೈರು ಹಾಜರಿ ಬಗ್ಗೆ ನಿಗಾವಹಿಸುವುದು. ಮಗು ಮೂರು (3) ದಿನಕ್ಕಿಂತ ಜಾಸ್ತಿದಿನಗಳ ಕಾಲ ಶಾಲೆಗೆ ಗೈರು ಹಾಜರಾದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಹಕಾರದೊಂದಿಗೆ ಅಂತಹ ಮಕ್ಕಳ ಪೋಷಕರನ್ನು ಭೇಟಿಮಾಡಿ ಮಗುವನ್ನು ವಾಪಸ್ ಶಾಲೆಗೆ ಕರೆಯಿಸುವ ಬಗ್ಗೆ ಶಿಕ್ಷಕರು ಕ್ರಮವಹಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
3. ಶಾಲೆ ಬಿಟ್ಟ ಮಕ್ಕಳ ಬಗ್ಗೆ ಅದರಲ್ಲೂ ಮುಖ್ಯವಾಗಿ ಋತುಮಾನದ ವಲಸೆಯಿಂದಾಗಿ ಶಾಲೆ ಬಿಡುವ ಮಕ್ಕಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಸಹಕಾರದಿಂದ ಅನುಪಾಲನೆ ಮಾಡುವುದು.
4. ಸುತ್ತೋಲೆಯಲ್ಲಿರುವಂತೆ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳು ರಚನೆಯಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು ಮಕ್ಕಳಿಗೆ ಬಾಲ್ಯವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳು ಮತ್ತು ಬಾಲ್ಯವಿವಾಹ ನಡೆಸಿದಲ್ಲಿ ದೊರೆಯುವ ಶಿಕ್ಷೆಯ ಬಗ್ಗೆ ಎಲ್ಲಾ ಶಾಲೆಗಳಲ್ಲಿ ಅರಿವು ಮೂಡಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
5. ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಧಾರಿತ ಶಿಕ್ಷಣದ ತರಗತಿಗಳನ್ನು ನಡೆಸುವ ಮೂಲಕ ಸಾಮಾಜಿಕ ಜವಾಬ್ದಾರಿಗಳನ್ನು ಉತ್ತೇಜಿಸುತ್ತೀರುವುದನ್ನು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
6. ಬಾಲ್ಯವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು.
7. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
8. ಬಾಲ್ಯವಿವಾಹದ ಬಗ್ಗೆ ಮಾಹಿತಿ ನೀಡಿದ ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
9. ಪ್ರತಿ ಶಾಲೆಯಲ್ಲಿ 'ಮಕ್ಕಳ ಸಹಾಯವಾಣಿ (1098)' ಎಲ್ಲರಿಗೂ ಗೋಚರಿಸುವ ರೀತಿಯಲ್ಲಿ ಪ್ರಚುರಪಡಿಸಿರುವುದನ್ನು ಖಾತ್ರಿಪಡಿಸಿಕೊಳ್ಳುವುದು.
10. ಶಾಲೆಗಳ ಹತ್ತಿರದಲ್ಲಿ ತಂಬಾಕು ಮತ್ತು ಇತರ ಮಾದಕ ವಸ್ತುಗಳ ಮಾರಾಟವಾಗುತ್ತಿಲ್ಲದಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
11. ಪ್ರತಿ ತಿಂಗಳು ಮೇಲಿನ ವಿಷಯಗಳ ಬಗ್ಗೆ ಎಲ್ಲಾ ಶಾಲೆಗಳಿಂದ ವರದಿ ಪಡೆಯುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

**ಒ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಗಳ ವಾರ್ಡ್‌ಮಟ್ಟದ ಅಧಿಕಾರಿಗಳು**

1. ಅಂಗನವಾಡಿ ಕಾರ್ಯಕರ್ತೆಯರು/ ಆರೋಗ್ಯ ಕಾರ್ಯಕರ್ತೆಯರು / ಆಶಾಕಾರ್ಯಕರ್ತೆಯರುಗಳ ಸಹಕಾರದೊಂದಿಗೆ ತಮ್ಮ ಕಾರ್ಯವ್ಯಾಪ್ತಿಯ ವಾರ್ಡ್‌ನಲ್ಲಿ ಜನಿಸುವ ಮಕ್ಕಳ ನೋಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಣೆಯಾದ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
2. ಸಾಮೂಹಿಕ ವಿವಾಹ/ ವೈಯಕ್ತಿಕ ವಿವಾಹಗಳಲ್ಲಿ ಬಾಲ್ಯವಿವಾಹ ನಡೆಯುವ ಬಗ್ಗೆ ದೂರು ಬಂದಲ್ಲಿ ತಕ್ಷಣ ಬಾಲ್ಯವಿವಾಹ ನಿಷೇಧಕಾಯ್ದೆಯನ್ವಯ ಬಾಲ್ಯವಿವಾಹ ತಡೆಯುವ ಬಗ್ಗೆ ಕ್ರಮವಹಿಸುವುದು.
3. ಸಾಮೂಹಿಕ ವಿವಾಹಗಳು ನಡೆಯುವ ಸ್ಥಳದಲ್ಲಿ ಖುದ್ದು ಹಾಜರಿದ್ದು, ಯಾವುದೇ ಬಾಲ್ಯವಿವಾಹ ನಡೆಯದಂತೆ ಖಚಿತಪಡಿಸಿಕೊಳ್ಳುವುದು.
4. ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ವಿವಾಹ ನಡೆಯುವ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ಫಲಕದಲ್ಲಿರುವ ಮಾಹಿತಿಯು ನಿಗದಿತ ಮಾರ್ಗಸೂಚಿಯಂತೆ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
5. ವಾರ್ಡ್‌ಗಳಲ್ಲಿ ನಡೆಯುವ ಮಹಿಳೆಯರ, ಮಕ್ಕಳ ರಕ್ಷಣೆಗೆ ಮತ್ತು ಬಾಲ್ಯವಿವಾಹಕ್ಕೆ ಸಂಬಂಧಿಸಿದ ಸಭೆಗಳಿಗೆ ತಪ್ಪದೇ ಹಾಜರಾಗುವುದು.

**ಒ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಕಾರ್ಮಿಕ ಅಧಿಕಾರಿ.**

1. ನಗರ/ ಪಟ್ಟಣ ವ್ಯಾಪ್ತಿಯಲ್ಲಿ ಮಕ್ಕಳನ್ನು ದುಡಿಸಿಕೊಳ್ಳದಂತೆ ನಿರಂತರ ನಿಗಾವಹಿಸುವುದು. ನಗರ/ ಪಟ್ಟಣ ವ್ಯಾಪ್ತಿಯಲ್ಲಿ ಯಾವುದೇ ಅಂಗಡಿಕಾರರು, ಹೋಟೆಲ್ ಮಾಲೀಕರು, ವ್ಯಾಪಾರಸ್ಥರು, ಉದ್ದಿಮೆದಾರರು, ಕೈಗಾರಿಕೆಗಳ ಮಾಲೀಕರು, ರೈತರು, ಅಥವಾ ಯಾವುದೇ ವ್ಯಕ್ತಿಗಳು ಮಕ್ಕಳನ್ನು ಅಂಗಡಿ, ಹೋಟೆಲ್, ಉದ್ದಿಮೆ, ಕೈಗಾರಿಕೆ ಅಥವಾ ಇನ್ನೂ ಯಾವುದೇ

ಸ್ಥಳದಲ್ಲಿ ದುಡಿಸಿಕೊಳ್ಳದಂತೆ ಅಥವಾ ಸಂಬಂಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಕ್ರಮ ಕೈಗೊಳ್ಳುವುದು.

2. ಬಾಲ್ಯಕಾರ್ಮಿಕತೆಯ ಬಗ್ಗೆ ಕಾರ್ಮಿಕ ಅಧಿಕಾರಿಯು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.

**ಔ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ.**

1. ಸಮಾಜ ಕಲ್ಯಾಣ ಇಲಾಖೆಯ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಒಳಾಡಳಿತ ಇಲಾಖೆ (ಪೊಲೀಸ್ ಇಲಾಖೆ) ಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳುದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
3. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಪೈಕಿ ಸ್ಥಳೀಯವಾಗಿರುವ ಯಾವುದಾದರೂ ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲ ರೀತಿಯ ಕ್ರಮವಹಿಸುವುದು.

**ಕ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು.**

1. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಮಾಜ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಹಿಂದುಳಿದ ವರ್ಗಗಳ ಪೈಕಿ ಯಾವುದಾದರು ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲ ರೀತಿಯ ಕ್ರಮವಹಿಸುವುದು.

**ಖ.ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು.**

1. ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಸಮಾಜ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಅಲ್ಪಸಂಖ್ಯಾತ ಸಮುದಾಯಗಳ ಪೈಕಿ ಯಾವುದಾದರು ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲಾ ರೀತಿಯ ಕ್ರಮವಹಿಸುವುದು.

26/11/2025

**(ರಂಗನಾಥ)**
ಸರ್ಕಾರದ ಉಪ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇದ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ರಚಿಸಲಾಗಿರುವ ಸಮಿತಿಗಳನ್ನು ವಿಲೀನಗೊಳಿಸಿ ಪುನರ್ ರಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ : ಮಮಇ 128 ಮಭಾಬ 2012, ದಿನಾಂಕ : 04.06.2013
2. ಸರ್ಕಾರದ ಆದೇಶ ಸಂಖ್ಯೆ : ಮಮಇ 105 ಮಮಅ 2013 ದಿನಾಂಕ:22.01.2014
3. ಸರ್ಕಾರದ ಆದೇಶ ಸಂಖ್ಯೆ : ಮಮಇ 201 ಮಭಾಬ 2013, ದಿನಾಂಕ : 18.09.2013
4. ಸರ್ಕಾರದ ಆದೇಶ ಸಂಖ್ಯೆ : ಮಮಇ 100 ಮಭಾಬ 2015, ದಿನಾಂಕ : 24.05.2016
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ:ಮಮಅಇ ಮಕ 55 2017-18, ದಿನಾಂಕ: 05.07.2019

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಮತ್ತು ಸಾಗಾಣಿಕೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ದಿನಾಂಕ:28.06.2007ರಲ್ಲಿ ರಚಿಸಲಾಗಿದ್ದ ಸಮಿತಿಯನ್ನು ಪುನರ್ ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಬಾಲ್ಯ ವಿವಾಹ ನಿಷೇದ ಕೋರ್ ಕಮಿಟಿಯ ವರದಿಯನ್ವಯ ಬಾಲ್ಯ ವಿವಾಹಗಳನ್ನು ತಡೆಯಲು ಸಮರ್ಪಕವಾಗಿ ಕಾರ್ಯ ನಿರ್ವಹಿಸುವ ದೃಷ್ಟಿಯಿಂದ ರಾಜ್ಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4)ರ ಆದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಮತ್ತು ಸಾಗಾಣಿಕೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಪುನರ್ ರಚಿಸಲಾಗಿದ್ದ ಕೆಲವು ಅಂಶಗಳಿಗೆ ತಿದ್ದುಪಡಿ ಮಾಡಲಾಗಿದೆ.

ದಿನಾಂಕ:23.01.2018ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕ್ಷೇತ್ರ ಮಟ್ಟದ ಸಮಿತಿಗಳ ಕಾರ್ಯ ನಿರ್ವಹಣೆ ಪರಿಶೀಲನೆ ಬಗ್ಗೆ ನಡೆದ ಸಭೆಯಲ್ಲಿ ಮಹಿಳೆಯರು ಮತ್ತು ಮಕ್ಕಳ

ಅನೈತಿಕ ಸಾಗಾಣಿಕೆ ತಡೆಗಟ್ಟಲು, ಬಾಲ್ಯ ವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣಾ ಸಮಿತಿಯನ್ನು ವಿಲೀನಗೊಳಿಸಿ ಒಂದೇ ಸಮಿತಿಯನ್ನು ರಚಿಸಲು ಸೂಚಿಸಲಾಗಿರುತ್ತದೆ. ಅದರಂತೆ ಮೂರು ಸಮಿತಿಗಳನ್ನು ವಿಲೀನಗೊಳಿಸಿ ಪರಿಷ್ಕರಿಸಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(5)ರ ಪ್ರಸ್ತಾವನೆಯಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನ ಕೂಲಂಕುಷವಾಗಿ ಪರಿಶೀಲಿಸಿ ಪ್ರಸ್ತಾಪಿಸಲಾದ ಮೂರು ಸಮಿತಿಗಳನ್ನು ವಿಲೀನಗೊಳಿಸಿ ಸಮಿತಿಯನ್ನು ರಚಿಸಲು ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ :06.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇದ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ರಚಿಸಲಾಗಿರುವ ಮಕ್ಕಳ ರಕ್ಷಣಾ ಸಮಿತಿಯನ್ನು ವಿಲೀನಗೊಳಿಸಿ ಈ ಕೆಳಕಂಡ ಸದಸ್ಯರನ್ನೊಳಗೊಂಡ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರ ಸಂ | ಸದಸ್ಯರು | ಪದನಾಮ |
|---|---|---|
| 1) | ಗ್ರಾಮ ಪಂಚಾಯತ್ ಅಧ್ಯಕ್ಷರು (ಮಹಿಳೆಯರು) | ಅಧ್ಯಕ್ಷರು |
| 2) | ಗ್ರಾಮ ಪಂಚಾಯತ್ ಉಪಾಧ್ಯಕ್ಷರು (ಮಹಿಳೆಯರು) ಮಹಿಳಾ ಉಪಾಧ್ಯಕ್ಷರಿದ್ದಲ್ಲಿ ಅವರನ್ನೇ ಸಮಿತಿಯ ಉಪಾಧ್ಯಕ್ಷರನ್ನಾಗಿ ನೇಮಿಸುವುದು, ಮಹಿಳಾ ಉಪಾಧ್ಯಕ್ಷರಿಲ್ಲದಿದ್ದಲ್ಲಿ ಮಹಿಳಾ ಸದಸ್ಯರನ್ನೇ ಉಪಾಧ್ಯಕ್ಷರನ್ನಾಗಿ ನೇಮಿಸುವುದು. | ಉಪಾಧ್ಯಕ್ಷರು |
| 3) | ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಎರಡು ಗ್ರಾಮ ಪಂಚಾಯತ್ ಸದಸ್ಯರು (ಕಡ್ಡಾಯವಾಗಿ ಒಬ್ಬರು ಮಹಿಳಾ ಸದಸ್ಯರು) | ಸದಸ್ಯರು |
| 4) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಳೀಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು (ತಾಲ್ಲೂಕು ಶಿಕ್ಷಣಾಧಿಕಾರಿಗಳು ಆಯ್ಕೆ ಮಾಡುವುದು) ಮುಖ್ಯೋಪಾಧ್ಯಾಯರು ಪುರುಷರಾಗಿದ್ದಲ್ಲಿ, ಮಹಿಳಾ ಶಿಕ್ಷಕರನ್ನು ಆಯ್ಕೆ ಮಾಡುವುದು. | ಸದಸ್ಯರು |
| 5) | ಗ್ರಾಮ ಲೆಕ್ಕಿಗರು (ಒಬ್ಬರನ್ನು ತಹಶೀಲ್ದಾರರು ನೇಮಿಸುವುದು) | ಸದಸ್ಯರು |
| 6) | ಎಲ್.ಎಚ್.ವಿ/ ಎ.ಎನ್.ಎಂ ಮತ್ತು ಆಶಾ ಕಾರ್ಯಕರ್ತೆ (ಎಲ್.ಎಚ್.ವಿ.ಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಎ.ಎನ್.ಎಂ.ಗಳನ್ನು ಹಾಗೂ ಆಶಾ ಕಾರ್ಯಕರ್ತೆಯನ್ನು ತಾಲ್ಲೂಕು ವೈದ್ಯಾಧಿಕಾರಿಗಳು ನಾಮ ನಿರ್ದೇಶನ ಮಾಡುವುದು) | ಸದಸ್ಯರು |
| 7) | ಬೀಟ್ ಪೊಲೀಸ್ ಅಧಿಕಾರಿ (ವೃತ್ತ ನಿರೀಕ್ಷಕರು ನಿಯೋಜಿಸುವುದು) | ಸದಸ್ಯರು |
| 8) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಿಡಿಎಸ್ ಮೇಲ್ವಿಚಾರಕಿ | ಸದಸ್ಯರು |

17

308

| | | |
|---|---|---|
| | (ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | |
| 9) | ಆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಮಹಿಳಾ ಪ್ರತಿನಿಧಿ | ಸದಸ್ಯರು |
| 10) | ಅಂಗನವಾಡಿ ಕಾರ್ಯಕರ್ತೆ (ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಒಬ್ಬ ಅಂಗನವಾಡಿ ಕಾರ್ಯಕರ್ತೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | ಸದಸ್ಯರು |
| 11) | ಸ್ತ್ರೀಶಕ್ತಿ ಸಂಘದ ಒಬ್ಬರು ಪ್ರತಿನಿಧಿ | ಸದಸ್ಯರು |
| 12) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರೌಢಶಾಲೆಯಲ್ಲಿ ಓದುತ್ತಿರುವ ಒಬ್ಬ ವಿದ್ಯಾರ್ಥಿ ಮತ್ತು ಒಬ್ಬ ವಿದ್ಯಾರ್ಥಿನಿ | ಸದಸ್ಯರು |
| 13) | ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

ಗ್ರಾಮ ಸಭೆಯಲ್ಲಿ ಇಬ್ಬರು ಗ್ರಾಮ ಪಂಚಾಯತ್ ಸದಸ್ಯರು, ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ, ಸ್ತ್ರೀಶಕ್ತಿ ಸಂಘದ ಇಬ್ಬರು ಪ್ರತಿನಿಧಿ ವಿದ್ಯಾರ್ಥಿ, ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡುವುದು ಹಾಗೂ ಸಮಿತಿಯಲ್ಲಿ ಶೇಕಡಾ50ರಷ್ಟು ಮಹಿಳಾ ಸದಸ್ಯರಿರುವಂತೆ ಕ್ರಮ ವಹಿಸುವುದು. ಸಮಿತಿ ಸಭೆಗಳಲ್ಲಿ ತೀರ್ಮಾನಿಸುವ ಎಲ್ಲಾ ಕಾರ್ಯಕ್ರಮಗಳು, ತೀರ್ಮಾನಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಸದಸ್ಯ ಕಾರ್ಯದರ್ಶಿಯದ್ದಾಗಿರುತ್ತದೆ. ಪ್ರತಿ ಮೂರು ತಿಂಗಳಿಗೊಮ್ಮೆ ಸಭೆಯನ್ನು ಏರ್ಪಡಿಸಿ ಚರ್ಚಿಸುವುದು.

ಸದರಿ ಸಮಿತಿ /ಸದಸ್ಯರ ಕಾರ್ಯ ಮತ್ತು ಜವಾಬ್ದಾರಿಗಳ ಬಗ್ಗೆ ಅನುಬಂಧ 1 ಮತ್ತು 2ರಲ್ಲಿ ವಿವರಿಸಲಾಗಿದ್ದು, ಅದರಂತೆ ಕಡ್ಡಾಯವಾಗಿ ಕಾರ್ಯ ನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ :

1) ಪ್ರಧಾನ ಮಹಾಲೇಖಪಾಲರು, ಬೆಂಗಳೂರು
2) ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
3) ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು
4) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
5) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು
6) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳಿಗೆ
7) ನಿರ್ದೇಶಕರು, ರಾಜ್ಯ ಹುಜೂರ್ ಖಜಾಣೆ, ಬೆಂಗಳೂರು

8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ಬೆಂಗಳೂರು
9) ಉಪ ನಿರ್ದೇಶಕರು, ಎನ್ ಎಂ ಸಿ ಝುನಿಕ ಭವನ, ಬೆಂಗಳೂರು
10) ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
11) ಎಲ್ಲ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
12) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
13) ಶಾಖಾ ರಕ್ಷಾ ಕಡತ

ಪ್ರತಿಯನ್ನು ಮಾಹಿತಿಗಾಗಿ : -

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು

## ಅನುಬಂಧ-1

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ : 06.08.2019**

**ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಮಿತಿಯ ಜವಾಬ್ದಾರಿಗಳು .**

- ✓ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳ ಮಾಹಿತಿ ಇಡಬೇಕು.
- ✓ ಪಂಚಾಯ್ತಿ ಕಛೇರಿ, ಶಾಲೆ, ಪೊಲೀಸ್, ಅಂಗನವಾಡಿ ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಬೇಕು.
- ✓ ಅನೈತಿಕ ಸಾಗಾಣಿಕೆಗೆ ಒಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ಸಹಾಯವನ್ನು ಒದಗಿಸುವುದು.
- ✓ ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಸಾಗಾಣಿಕೆಯನ್ನು ನಿಷೇಧಿಸುವಲ್ಲಿ ಉಸ್ತುವಾರಿ ಮಾಡುವುದು.
- ✓ ಸಾಗಾಣಿಕೆ ತಡೆಯಲು ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳುವುದು. ಸಾಗಾಣಿಕೆ ತಡೆಯಲು ಪ್ರಚಾರಕ್ಕಾಗಿ ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢಿಕರಣಗೊಳಿಸುವುದು.
- ✓ ಮಕ್ಕಳ ಸಾಗಾಣಿಕೆ ವಿರುದ್ಧ ಶಾಲೆಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಬೇಕು.
- ✓ ಹೊಸ ವ್ಯಕ್ತಿಗಳು ಗ್ರಾಮಕ್ಕೆ ಆಗಮಿಸಿದ ಬಗ್ಗೆ ದಾಖಲೆ ಇಡಬೇಕು.
- ✓ ಗ್ರಾಮದಿಂದ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡಬೇಕು.
- ✓ ವಲಸೆ ಹೋದ ಕುಟುಂಬದ ಮಾಹಿತಿಯಿಡಬೇಕು ಮತ್ತು ಈ ಕುಟುಂಬದ ಬಗ್ಗೆ ಮೇಲ್ವಿಚಾರಣೆ ಮಾಡಬೇಕು
- ✓ ಬಾಲ್ಯ ವಿವಾಹ ನಿಷೇಧ, ದುಷ್ಪರಿಣಾಮಗಳು ಮತ್ತು ಬಾಲ್ಯ ವಿವಾಹ ನಿಷೇಧ ಕಾನೂನಿನ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು.
- ✓ ಗ್ರಾಮದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ಕೂಡಲೇ ಸಂಬಂಧಪಟ್ಟ ಬಾಲ್ಯ ವಿವಾಹ ನಿಷೇದಾಧಿಕಾರಿಗಳ ಗಮನಕ್ಕೆ ತಂದು ಎಫ್.ಐ.ಆರ್. ಒಳಗೊಂಡಂತೆ ಅಗತ್ಯ ಕ್ರಮ ಕೈಗೊಳ್ಳುವುದು.
- ✓ ಬೇಸಿಗೆ ರಜೆ ಅವಧಿ ಮುಗಿದ ನಂತರ ಶಾಲೆಗೆ ದಾಖಲಾದ/ದಾಖಲಾಗಬೇಕಾದ ಮಕ್ಕಳ ಸಮೀಕ್ಷೆ ನಡೆಸುವುದು.
- ✓ ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಾಗುವ ಬಗ್ಗೆ ಕ್ರಮ ವಹಿಸುವುದು.
- ✓ ಗ್ರಾಮ ಸಭೆಗಳಲ್ಲಿ ಮಕ್ಕಳ ವಿದ್ಯಾಭ್ಯಾಸದ ಮಹತ್ವ, ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯ ಮುಂತಾದುವುಗಳನ್ನು ಸಾರ್ವಜನಿಕರ ಗಮನಕ್ಕೆ ತರುವುದು.
- ✓ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.
- ✓ ಉತ್ತಮ ಅಂಕಗಳನ್ನು ಪಡೆದ ಮಕ್ಕಳನ್ನು ಗ್ರಾಮಸಭೆಗಳಲ್ಲಿ ಪ್ರೋತ್ಸಾಹಿಸುವುದು.
- ✓ ಹೆಣ್ಣುಮಕ್ಕಳ ದಾಖಲಾತಿ ಹೆಚ್ಚಿರುವ ಶಾಲೆಗಳನ್ನು ಗುರುತಿಸಿ, ಗ್ರಾಮಸಭೆಗಳಲ್ಲಿ ಸನ್ಮಾನಿಸುವುದು.

- ✓ ಗ್ರಾಮಸಭೆಗಳ ಮೂಲಕ ಉತ್ತಮ ಶಿಕ್ಷಣ ತಜ್ಞರಿಂದ ವಿದ್ಯಾಭ್ಯಾಸದ ಮಹತ್ವದ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವುದು.
- ✓ 7ನೇ ತರಗತಿಯಿಂದ 8ನೇ ತರಗತಿ ಹಾಗೂ 10ನೇ ತರಗತಿಯಿಂದ ಪಿ.ಯು.ಸಿ. ತರಗತಿಗಳಿಗೆ ಮಕ್ಕಳು ದಾಖಲಾಗುವಂತೆ ಸಮಿತಿಯ ಸದಸ್ಯರು ಖಚಿತಪಡಿಸಿಕೊಳ್ಳುವುದು.
- ✓ ಪಂಚಾಯತ್ ವ್ಯಾಪ್ತಿಯಲ್ಲಿ ಸರಕಾರಿ ಸೌಲಭ್ಯಗಳನ್ನು ನೀಡುವಾಗ ಫಲಾನುಭವಿಗಳಿಂದ ಅವರ ಕುಟುಂಬಗಳಲ್ಲಿ ಬಾಲಕಾರ್ಮಿಕತೆ ಅವಕಾಶವಿಲ್ಲದಂತೆ ಕರಾರು ಪತ್ರ ಬರೆಯಿಸಿಕೊಳ್ಳುವುದು.
- ✓ ಮಕ್ಕಳನ್ನು ದುಡಿಸುವ ಮಾಲೀಕರುಗಳಿಗೆ ಹಾಗೂ ಸಹಕರಿಸುವವರಿಗೂ ಕ್ರಮ ಜರುಗಿಸುವಂತೆ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡುವುದು.
- ✓ ಗ್ರಾಮ ಪಂಚಾಯತ್ ವ್ಯಾಪ್ತಿಯ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕ್ಕಾಗಿ ಸಮುದಾಯದ, ಇಲಾಖೆಗಳ, ನಾಗರಿಕ ಸಂಘಸಂಸ್ಥೆಗಳ ಪಾಲುದಾರಿಕೆ, ಸಹಭಾಗಿತ್ವ, ಸಮನ್ವಯತೆ ಮತ್ತು ಹೊಣೆಗಾರಿಕೆ ಕುರಿತು ಕ್ರಮ ಕೈಗೊಳ್ಳುವುದು.
- ✓ ಪಂಚಾಯತ್ ಮಟ್ಟದಲ್ಲಿ ಯಾವುದೇ ರೈತರು, ಕಾರ್ಮಿಕರು ಮಕ್ಕಳನ್ನು ಹೊಲ, ಗದ್ದೆ, ಜೀತ ಸಂಬಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಹಾಗೂ ದನ, ಕುರಿ, ಎಮ್ಮೆ ಮೇಯಿಸಲು ಮಕ್ಕಳನ್ನು ಬಳಸದಂತೆ ನಿರಂತರ ನಿಗಾವಹಿಸಿ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ನಿರಂತರ ಶಿಕ್ಷಣ ಒದಗಿಸಲು ಕ್ರಮ ಕೈಗೊಳ್ಳುವುದು.
- ✓ ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಘಡಗಳಿಗೆ 18 ವರ್ಷದೊಳಗಿನ ಮಕ್ಕಳು ಬಲಿಯಾಗದಂತೆ ರಕ್ಷಣೆ ನೀಡುವುದು ಹಾಗೂ ಈ ಕುರಿತು ಕ್ರಮ ಕೈಗೊಳ್ಳುವುದು.
- ✓ ಅನಾಥ/ಪೋಷಕರಿಗೆ ಬೇಡವಾದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು. ಸಂಕಷ್ಟದಲ್ಲಿರುವ ಮಹಿಳೆ/ಹೆಣ್ಣು ಮಕ್ಕಳು ಗರ್ಭಿಣಿಯಾದಾಗ ಇವರನ್ನು ನಿರಂತರವಾಗಿ ಅನುಸರಣೆ ಮಾಡುವುದು.
- ✓ ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಕೈಗೆತ್ತಿಕೊಂಡು ಸಮಸ್ಯೆಗಳನ್ನು ಬಗೆಹರಿಸುವುದು.
- ✓ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಕಂಡುಬಂದಲ್ಲಿ ಮಗುವಿಗೆ ರಕ್ಷಣೆ ನೀಡಿ ತಕ್ಷಣ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.
- ✓ ಕಡ್ಡಾಯವಾಗಿ ಮಕ್ಕಳ ಗ್ರಾಮಸಭೆ ನಡೆಸುವಂತೆ ಕ್ರಮ ವಹಿಸಿ ಸದರಿ ಸಭೆಯಲ್ಲಿ ಚರ್ಚಿಸಿದ ಅಂಶಗಳಿಗೆ ಕ್ರಮ ವಹಿಸುವುದು.
- ✓ ಮಕ್ಕಳಿಗೆ ಸಂಬಂಧಿಸಿದ ಸೂಕ್ತ ಯೋಜನೆಗಳಲ್ಲಿ ಅವಶ್ಯಕವಾದ ಸೌಲಭ್ಯ ಪರಿಹಾರ, ಪುನರ್ವಸತಿ ಮತ್ತು ಪರ್ಯಾಯ ವ್ಯವಸ್ಥೆಗಳನ್ನು ಆಯಾ ಇಲಾಖೆಗಳ ಅನುಸಾರವಾಗಿ ಮಕ್ಕಳಿಗೆ/ಕುಟುಂಬಗಳಿಗೆ ಒದಗಿಸುವುದು.
- ✓ ಗ್ರಾಮ ಪಂಚಾಯಿತಿಯ ಪ್ರತಿ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್/ಮೀನಾ ತಂಡ/ಮಕ್ಕಳ ಸುರಕ್ಷಾ ಸಮಿತಿಗಳ ಕಾರ್ಯ ವೈಖರಿಯ ಬಗ್ಗೆ ಮೇಲ್ವಿಚಾರಣೆ ಮಾಡುವುದು ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳುವುದು.

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

## ಅನುಬಂಧ-2

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ : 06.08.2019**

**ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಮಿತಿಯ ಸದಸ್ಯರ ಜವಾಬ್ದಾರಿಗಳು.**

- 0 ಯಿಂದ 06 ವರ್ಷದೊಳಗಿನ ಎಲ್ಲಾ ಮಕ್ಕಳ ಮಾಹಿತಿಯನ್ನು ನಿರ್ವಹಿಸುವುದು.
- ಆರೋಗ್ಯ ಇಲಾಖೆಯ ಶುಶ್ರೂಷಕರು/ದಾದಿಗಳು/ಆಶಾ ಕಾರ್ಯಕರ್ತೆಯರೊಂದಿಗೆ ಗ್ರಾಮದಲ್ಲಿ ಆಗುವ ಪ್ರತಿಯೊಂದು ಜನನದ ಬಗ್ಗೆ ಗ್ರಾಮ ಲೆಕ್ಕಿಗರೊಂದಿಗೆ ಪರಿಶೀಲಿಸಿ, ಹೊಂದಾಣಿಕೆ ಮಾಡಿಕೊಳ್ಳುವುದು.
- ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು ಪಂಚಾಯತ್ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ವೃತ್ತ ಮೇಲ್ವಿಚಾರಕಿಯರಿಗೆ ಬಾಲ್ಯ ವಿವಾಹಗಳನ್ನು ಒಳಗೊಂಡಂತೆ ಮಾಹಿತಿಯನ್ನು ಪ್ರತಿ ತಿಂಗಳು ವರದಿ ಮಾಡತಕ್ಕದ್ದು. ಬಾಲ್ಯ ವಿವಾಹ ನಡೆಯುವ ಸಂದರ್ಭದಲ್ಲಿ ಗ್ರಾಮಲೆಕ್ಕಿಗರಿಗೆ ದೂರು ನೀಡುವುದು.

### ಎ.ಎನ್.ಎಮ್/ಆಶಾ ಕಾರ್ಯಕರ್ತೆಯರು

- ಗ್ರಾಮದಲ್ಲಿ ಜನಿಸಿದ ಮಕ್ಕಳ ನೋಂದಣಿಯನ್ನು ಗ್ರಾಮಲೆಕ್ಕಿಗರು ಮಾಡಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳುವುದು.
- ಮಹಿಳೆಯರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹದಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಲ್ಲಿ ಅರಿವು ಮೂಡಿಸುವುದು.
- ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ ಮಕ್ಕಳು/ ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು. ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ಪ್ರತಿ 2 ತಿಂಗಳಿಗೊಮ್ಮೆ ಸಭೆಗಳಿಗೆ ಹಾಜರಾಗುವುದು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನೆ ಮಾಡುವುದು.
- ಪ್ರತಿ ತಿಂಗಳು ಮಾಹಿತಿಯನ್ನು ಮಹಿಳಾ ಆರೋಗ್ಯ ಸಂದರ್ಶಕರಿಗೆ ನೀಡುವುದು.
- ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯ ಗಮನಕ್ಕೆ ತರುವುದು.
- ಭಿಕ್ಷಾಟನೆ/ಬೀದಿ-ಚಿಂದಿ ಆಯುವ ಮಕ್ಕಳಿಗೆ ರಕ್ಷಣೆ ಒದಗಿಸಿ ಶಿಕ್ಷಣ ನೀಡುವಂತೆ ಕ್ರಮವಹಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಪೊಲೀಸ್ ಹಾಗೂ ಸಮಿತಿಯ ಗಮನಕ್ಕೆ ತರುವುದು.

- ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಗಡಗಳಿಗೆ 18 ವರ್ಷದೊಳಗಿನ ಮಕ್ಕಳು ಬಲಿಯಾಗದಂತೆ ರಕ್ಷಣೆ ಮಾಡಲು ಸಮಿತಿಯ ಗಮನಕ್ಕೆ ತರುವುದು.
- ಪಂಚಾಯಿತಿ ಮಟ್ಟದಲ್ಲಿ ಯಾವುದೇ ರೈತರು, ಕಾರ್ಮಿಕರು ಮಕ್ಕಳನ್ನು ದುಡಿಸದಂತೆ ಹಾಗೂ ದನ, ಕುರಿ, ಎಮ್ಮೆ ಮೇಯಿಸಲು ಬಳಸದಂತೆ ನಿರಂತರ ನಿಗಾವಹಿಸುವುದು.
- ಅನಾಥ/ಪೋಷಕರಿಗೆ ಬೇಡವಾದ ಮಕ್ಕಳು/ ಬೀದಿಯಲ್ಲಿ ಬಿಸಾಡಿದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಮಕ್ಕಳ ಸಹಾಯವಾಣಿ-1098 ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು.

- **ಪೋಲೀಸ್ ಅಧಿಕಾರಿ** : ಮಕ್ಕಳ ದೌರ್ಜನ್ಯ ಪ್ರಕರಣಗಳು ಬಂದಲ್ಲಿ ಎಫ್.ಐ.ಆರ್. ಮಾಡುವುದು ಮತ್ತು ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯವರೊಂದಿಗೆ ಚರ್ಚಿಸಿ ಕ್ರಮವಹಿಸುವುದು.

## ಮುಖ್ಯೋಪಾಧ್ಯಾಯರು / ಶಿಕ್ಷಕರು :

- ಮಗುವನ್ನು ಶಾಲೆಯಲ್ಲಿ ಉಳಿಸಿಕೊಳ್ಳಲು ಪ್ರಯತ್ನಿಸುವುದು.
- ಶಾಲೆ ಬಿಟ್ಟ ಮಕ್ಕಳ ಬಗ್ಗೆ ಅದರಲ್ಲೂ ಮುಖ್ಯವಾಗಿ ಋತುಮಾನದ ವಲಸೆಯಿಂದಾಗಿ ಶಾಲೆ ಬಿಡುವ ಮಕ್ಕಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅನುಪಾಲನೆ ಮಾಡುವುದು.
- ಮಕ್ಕಳ ಗೈರು ಹಾಜರಿ ಬಗ್ಗೆ ನಿಗಾ ವಹಿಸುವುದು. ಮಗು 3 ದಿನಕ್ಕಿಂತ ಜಾಸ್ತಿ ದಿನಗಳ ಕಾಲ ಶಾಲೆಗೆ ಗೈರುಹಾಜರಾದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅಂತಹ ಮಕ್ಕಳ ಪೋಷಕರನ್ನು ಭೇಟಿ ಮಾಡಿ ಮಗುವನ್ನು ವಾಪಸ್ ಶಾಲೆಗೆ ಕರೆಯಿಸುವ ಬಗ್ಗೆ ಕ್ರಮ ವಹಿಸುವುದು.
- ಸುತ್ತೋಲೆಯಲ್ಲಿರುವಂತೆ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳನ್ನು ರಚಿಸುವುದು. ಮಕ್ಕಳನ್ನು ಬಾಲ್ಯ ವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿಯಲು ಮತ್ತು ಬಾಲ್ಯ ವಿವಾಹ ನಡೆಸಿದಲ್ಲಿ ದೊರೆಯುವ ಶಿಕ್ಷೆಯ ಬಗ್ಗೆ ಅರಿವು ಮೂಡಿಸಲು ಸಕ್ರಿಯವಾಗಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು.
- ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಧಾರಿತ ಶಿಕ್ಷಣದ ತರಗತಿಗಳನ್ನು ನಡೆಸುವ ಮೂಲಕ ಸಾಮಾಜಿಕ ಜವಾಬ್ದಾರಿಗಳನ್ನು ಉತ್ತೇಜಿಸುವುದು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವುದು.
- ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ ಮಕ್ಕಳು/ ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಸಮುದಾಯದಿಂದ ಬಾಲ್ಯ ವಿವಾಹದ ಬಗ್ಗೆ ಮಾಹಿತಿ ದೊರೆತ ತಕ್ಷಣ ಗ್ರಾಮದ ಗ್ರಾಮ ಲೆಕ್ಕಿಗರಿಗೆ ಮಾಹಿತಿ ನೀಡುವುದು. ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ಕ್ಷೇತ್ರ ಶಿಕ್ಷಣಾಧಿಕಾರಿಗೆ ಮೇಲಿನ ವಿಷಯಗಳನ್ವಯ ಪ್ರತಿ ತಿಂಗಳು ವರದಿ ಮಾಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

30

## ಗ್ರಾಮ ಲೆಕ್ಕಿಗರು

- ಅಂಗನವಾಡಿ ಕಾರ್ಯಕರ್ತೆಯರು/ ಎ.ಎನ್.ಎಮ್/ ಆಶಾ ಕಾರ್ಯಕರ್ತೆಯರುಗಳ ಸಹಕಾರದೊಂದಿಗೆ ಪ್ರತಿ ಗ್ರಾಮದಲ್ಲಿ ಜನಿಸುವ ಮಕ್ಕಳ ನೋಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಸಾಮೂಹಿಕ ವಿವಾಹ/ ವೈಯುಕ್ತಿಕ ವಿವಾಹಗಳಲ್ಲಿ ಬಾಲ್ಯ ವಿವಾಹ ನಡೆಯುವ ಬಗ್ಗೆ ದೂರು ಬಂದಲ್ಲಿ ತಕ್ಷಣ ಸೂಕ್ತ ಕ್ರಮ ಕೈಗೊಂಡು, ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ವಯ ಬಾಲ್ಯ ವಿವಾಹ ತಡೆಯುವ ಬಗ್ಗೆ ಕ್ರಮ ವಹಿಸುವುದು.
- ಸಾಮೂಹಿಕ ವಿವಾಹಗಳು ನಡೆಯುವ ಸ್ಥಳದಲ್ಲಿ ಖುದ್ದು ಹಾಜರಿದ್ದು, ಯಾವುದೇ ಬಾಲ್ಯ ವಿವಾಹ ನಡೆಯದಂತೆ ಖಚಿತಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ವಿವಾಹ ನಡೆಯುವ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ಫಲಕದಲ್ಲಿರುವ ಮಾಹಿತಿಯು ನಿಗದಿತ ಮಾರ್ಗ ಸೂಚಿಯಂತೆ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
- ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ಮಾಸಿಕ ಸಭೆಗಳಿಗೆ ತಪ್ಪದೇ ಹಾಜರಾಗುವುದು.
- ರಾಜಸ್ವ ನಿರೀಕ್ಷಕರು/ತಹಶೀಲ್ದಾರರಿಗೆ ಬಾಲ್ಯವಿವಾಹದ ಮಾಹಿತಿಯನ್ನು ಒಳಗೊಂಡಂತೆ ಪ್ರತಿ ತಿಂಗಳು ಮಾಹಿತಿ ನೀಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

## ಸಮಿತಿಯ ಸಭೆಗಳನ್ನು ಕರೆಯುವುದು

- ಸದರಿ ಸಮಿತಿಯು ಮೂರು ತಿಂಗಳಿಗೊಮ್ಮೆ ಸಭೆ ಸೇರತಕ್ಕದ್ದು.
- ಸಮಿತಿಯ ಸಭೆಯನ್ನು, ಸದಸ್ಯ ಕಾರ್ಯದರ್ಶಿಯು ಸಮಿತಿಯ ಅಧ್ಯಕ್ಷರೊಂದಿಗೆ ಸಮಾಲೋಚಿಸಿ, ನಿಗಧಿಪಡಿಸಬಹುದಾದಂತಹ ದಿನಗಳಂದು ಮತ್ತು ಸಮಯದಲ್ಲಿ ನಡೆಸತಕ್ಕದ್ದು.
- ಸದಸ್ಯ ಕಾರ್ಯದರ್ಶಿಯು ಪ್ರತಿಯೊಂದು ಸಭೆಯ ಬಗ್ಗೆ ಸದಸ್ಯರಿಗೆ ಕನಿಷ್ಠ 3 ದಿನಗಳ ಮೊದಲು ಸಭಾ ಸೂಚನೆಯಯನ್ನು ಉದ್ದೇಶಿತ ಕಾರ್ಯಸೂಚಿಯೊಂದಿಗೆ ನೀಡತಕ್ಕದ್ದು.
- ಸದಸ್ಯ ಕಾರ್ಯದರ್ಶಿಯು ಒಂದು ದಿನದ ಮೊದಲು ನೋಟೀಸನ್ನು ನೀಡುವ ಮೂಲಕ ತುರ್ತು ಸಭೆಯನ್ನು ಕರೆಯಬಹುದು.
- ಸಭೆಯ ಕೋರಂ ಅಧ್ಯಕ್ಷರು ಸೇರಿದಂತೆ ಒಟ್ಟು ಸದಸ್ಯರಲ್ಲಿ ಶೇಕಡ 50ಕ್ಕಿಂತ ಹೆಚ್ಚಿನ ಸದಸ್ಯರು ಸಭೆಯಲ್ಲಿ ಹಾಜರಿರತಕ್ಕದ್ದು.
- ಕೋರಂ ಕೊರತೆಯಿಂದಾಗಿ ಸಭೆಯನ್ನು ನಡೆಸಲಾಗದಿದ್ದಲ್ಲಿ, ಸದರಿ ದಿನಾಂಕದಿಂದ 4 ದಿನಗಳ ಒಳಗೆ ಮತ್ತೊಂದು ದಿನಕ್ಕೆ ಸದಸ್ಯ ಕಾರ್ಯದರ್ಶಿಯು ಸಭೆಯನ್ನು ನಿಗಧಿಪಡಿಸತಕ್ಕದ್ದು. ನಿಗಧಿಪಡಿಸಲ್ಪಟ್ಟ ಸಭೆಯೂ ಸಹ ಅಗತ್ಯ ಕೋರಂ ಹೊಂದಿರದಿದ್ದಲ್ಲಿ, ಆಗ ವಾಸ್ತವವಾಗಿ ಹಾಜರಿರುವ ಸದಸ್ಯರ ಕೋರಂ ಸಾಕಾಗುತ್ತದೆ.
- ಅಧ್ಯಕ್ಷರ ಗೈರು ಹಾಜರಿದ್ದಲ್ಲಿ ತುರ್ತು ಸಭೆಯನ್ನು ಕರೆಯಬೇಕಾದ ಸಂದರ್ಭವಿದ್ದಲ್ಲಿ, ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸುವುದು.

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ
ದೂರವಾಣಿ ಸಂಖ್ಯೆ : 080 - 2235 2931

25

Gmail Director Directorate of Child Protection <icps.kar@gmail.com>

# Re: Districtwise less than 18 Age Pregnant woman reported in RCH portal from April 2023 to July 2025

1 message

**Director Directorate of Child Protection** <icps.kar@gmail.com> 3 December 2025 at 11:29
To: JD Demographer <demohealthkar@gmail.com>

Pl furnish the data District wise till November'2025

On Tue, 2 Dec 2025 at 16:08, JD Demographer <demohealthkar@gmail.com> wrote:

Dear Sir / Madam,

As requested, please find the Pregnant women reported in RCH portal from April 2023 to July 2025

| Sl.no | Year | Total PW registered | Total <18 years of PW (14-18) | Total 18> years of PW |
|---|---|---|---|---|
| 1 | 2023-24 | 1076013 | 8666 | 1067347 |
| 2 | 2024-25 | 1067181 | 4746 | 1062435 |
| 3 | 2025 to till July | 679640 | 1229 | 678411 |

--
**With Warm Regards,**
**State Demographer,**
**Health and Family Welfare Services.**
**Aarogya Soudha, 1st Floor, East Wing**
**1st Cross, Magadi Road, Bangalore-560023**
**HMIS / RCH TEAM, KARNATAKA**

On Tue, Dec 2, 2025 at 11:07 AM Director Directorate of Child Protection <icps.kar@gmail.com> wrote:

Dear Team,
Kindly share the data of Teenage pregnancy 18 Age Pregnant women reported in RCH portal from April 2023 to July 2025.Honble MLA has raised(Attached below) Calling attention Question at Belagavi Session information is required to answer the same.
Pl share the date as below format:

| Sl.no | Year | Total <18 years of PW (14-18) | Total 18> years of PW | Total |
|---|---|---|---|---|
| 1 | 2023-24 | | | |
| 2 | 2024-25 | | | |
| 3 | 2025 to till July | | | |

With regards,

## Districtwise less than 18 Age Pregnant woman reported in RCH portal

## from April 2025 to August 2025 (as on 28.8.2025)

| Sl.No. | District | 14-15 | 15-16 | 16-17 | 17-18 | Total <18 years of PW |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | Bagalkote | 0 | 4 | 1 | 14 | 19 |
| 2 | Ballari | 4 | 9 | 18 | 64 | 95 |
| 3 | Belagavi | 0 | 1 | 10 | 78 | 89 |
| 4 | Bengaluru Rural | 1 | 0 | 2 | 9 | 12 |
| 5 | Bengaluru Urban | 1 | 3 | 12 | 127 | 143 |
| 6 | Bidar | 1 | 4 | 7 | 33 | 45 |
| 7 | Chamarajanagara | 1 | 3 | 2 | 4 | 10 |
| 8 | Chikkaballapura | 0 | 2 | 2 | 17 | 21 |
| 9 | Chikkamagaluru | 2 | 4 | 10 | 12 | 28 |
| 10 | Chitradurga | 2 | 0 | 10 | 48 | 60 |
| 11 | Dakshina Kannada | 2 | 0 | 4 | 5 | 11 |
| 12 | Davanagere | 0 | 3 | 2 | 16 | 21 |
| 13 | Dharwad | 0 | 0 | 0 | 3 | 3 |
| 14 | Gadag | 0 | 1 | 3 | 4 | 8 |
| 15 | Hassan | 1 | 4 | 7 | 38 | 50 |
| 16 | Haveri | 0 | 1 | 6 | 12 | 19 |
| 17 | Kalaburagi | 0 | 2 | 4 | 22 | 28 |
| 18 | Kodagu | 2 | 5 | 7 | 17 | 31 |
| 19 | Kolar | 0 | 2 | 7 | 33 | 42 |
| 20 | Koppal | 2 | 1 | 7 | 39 | 49 |
| 21 | Mandya | 0 | 2 | 3 | 20 | 25 |
| 22 | Mysuru | 1 | 2 | 9 | 42 | 54 |
| 23 | Raichur | 6 | 15 | 44 | 176 | 241 |
| 24 | Ramanagara | 0 | 5 | 5 | 14 | 24 |
| 25 | Shivamogga | 2 | 2 | 4 | 15 | 23 |
| 26 | Tumakuru | 2 | 8 | 24 | 127 | 161 |
| 27 | Udupi | 0 | 1 | 2 | 3 | 6 |
| 28 | Uttara Kannada | 0 | 2 | 1 | 6 | 9 |
| 29 | Vijayanagar | 1 | 1 | 3 | 6 | 11 |
| 30 | Vijayapura | 0 | 1 | 1 | 86 | 88 |
| 31 | Yadgir | 1 | 2 | 9 | 17 | 29 |
| **Grand Total** | | **32** | **90** | **226** | **1107** | **1455** |